# ಚುನಾವಣಾ ದೂರು ನಿಯಂತ್ರಣ ಕೊಠಡಿ, ಮಾಧ್ಯಮ ಪ್ರಮಾಣೀಕರಣ ಮತ್ತು ನಿಗಾ ಕೇಂದ್ರಕ್ಕೆ ಸಾಮಾನ್ಯ ವೀಕ್ಷಕ ಚಂದ್ರಶೇಖರ್ ಸಖಮುರಿ ಭೇಟಿ, ವೀಕ್ಷಣೆ



ಬಳ್ಳಾರಿ,ಏ-:ಬಳ್ಳಾರಿ ಲೋಕ ಸಭಾ ಸಾರ್ವತ್ರಿಕ ಚುನಾ ವಣೆಯನ್ನು ಮುಕ್ತ, ನ್ಯಾಯಸ ‘ಮ್ಮತವಾಗಿ ನಡೆಸಲು ಮತ್ತು ಅಕ್ರಮ ಚಟುವಟಿಕೆಗಳ ದೂರು ದಾಖಲು ಮಾಡಿಕೊಳ್ಳಲು ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಈಗಾಗಲೇ ಕಾರ್ಯ ಪ್ರವೃತ್ತರಾಗಿರುವ ಚುನಾವಣಾ ದೂರು ನಯಂತ್ರಣ ಕೊಠಡಿ, ಮಾಧ್ಯಮ ಪ್ರಮಾಣೀ ಕರಣ ಮತ್ತು ನಗಾ ಕೇಂದ್ರಕ್ಕೆ ಸಾಮಾನ್ಯ ವೀಕ್ಷಕರಾದ ಚಂದ್ರಶೇಖರ್ ಸಖಮುರಿ ಅವರು ಶುಕ್ರವಾರ ಭೇಟಿ ನೀಡಿ ವೀಕ್ಷಣೆ ಮಾಡಿದರು.ಮಾದರಿ ನೀತಿ ಸಂಹಿತೆ ಜಾರಿಯಾದಾಗಿನಿಂದ ಇಲ್ಲಿಯವರೆಗೆ ಚುನಾವಣಾ ಅಕ್ರಮಗಳಿಗೆ ಸಂಬಂಧಿಸಿದಂತೆ ಸಿ-ವಿಜಿಲ್ ಮೂಲಕ ಸಲ್ಲಿಕೆಯಾಗಿರುವ ದೂರುಗಳ ಮಾಹಿತಿ ಪಡೆದುಕೊಂಡರು. ಸಕಾಲದಲ್ಲಿ ವಿಲೇವಾರಿ ಮಾಡುವಂತೆ ಸೂಚಿಸಿದರು.ಬಳಿಕ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಪ್ರಮಾಣೀಕರಣ ಮತ್ತು ನಿಗಾ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು ಚುನಾವಣೆ ಅಕ್ರಮ, ಕಾಸಿಗಾಗಿ ಸುದ್ದಿ ಹಾಗೂ ಇತರೆ ವಿಷಯಗಳ ಕುರಿತು ದೃಶ್ಯ ಮಾಧ್ಯಮಗಳಲ್ಲಿ ಪ್ರಸಾರವಾಗುವುದನ್ನು ಹದ್ದಿನ ಕಣ್ಣಿನಂತೆ ನಿಗಾವಹಿಸಬೇಕು ಎಂದು ಎಂಸಿಎಂಸಿ ಸಮಿತಿಯಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳಿಗೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಸ್ವೀಪ್ ನೋಡೆಲ್ ಅಧಿಕಾರಿ ಹಾಗೂ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬೆಳಗಾವಿಯ ಅಭಿವೃದ್ಧಿಗೆ ಶೆಟ್ಟರ ಆಯ್ಕೆ ಅಗತ್ಯ: ಡಾ.ಪ್ರಭಾಕರ ಕೋರೆ ಕೆಎಲ್‌ಇ ಅಂಗಳದಲ್ಲಿ ಜಗದೀಶ್ ಶೆಟ್ಟರ ಪರ ಮತಯಾಚನೆ



ಬೆಳಗಾವಿ -: ಭಾರತವನ್ನು ಜಗತ್ತು ನೋಡುವಂತೆ ಮಾಡಿದ್ದರೆ ಅದು ಪ್ರಧಾನ ನರೇಂದ್ರ ಮೋದಿಜಿ ಯವರು. ಅವರ ದಿಟ್ಟ ಹಾಗೂ ಪ್ರಖರವಾದ ಯೋಜನೆಗಳು, ದೇಶದ ಆರ್ಥಿಕತೆಯನ್ನು ಬದಲಾಯಿಸಿದೆ. ಭಾರತ ವಿಶ್ವ ಪ್ರಬಲ ರಾಷ್ಟ್ರವಾಗಿ ಹೊರಹೊಮ್ಮಿದೆ. ಅಂತಹ ಪ್ರಧಾನ ಈ ದೇಶಕ್ಕೆ ಮತ್ತೊಮ್ಮೆ ಬೇಕು. ಅವರ ಆಡಳಿತದಲ್ಲಿ ಬೆಳಗಾವಿಯಿಂದ ಜಗದೀಶ್ ಶೆಟ್ಟರ ಪ್ರಚಂಡ ಬಹುಮತದಿಂದ ಆಯ್ಕೆ ಮಾಡಿ ಕಳುಹಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರ ಕೋರೆಯವರು ಹೇಳಿದರು.
ಅವರು ಬೆಳಗಾವಿಯ ಕೆಎಲ್‌ಇ ಸಂಸ್ಥೆಯ ಜೆಎನ್‌ಎಂಸಿ ಆವರಣದ ಸಿಬ್ಬಂದಿವರ್ಗ ಹಾಗೂ ಲಿಂಗರಾಜ ಕಾಲೇಜಿನ ಆವರಣದಲ್ಲಿ ಸಿಬ್ಬಂದಿವರ್ಗದವರನ್ನು ಭೇಟಿಯಾಗಿ ಶೆಟ್ಟರ ಅವರ ಪರವಾಗಿ ಮತಯಾಚಿಸಿದರು.

ಕೆಎಲ್‌ಇ ನೂರು ವರ್ಷಗಳ ತನ್ನ ಚರಿತ್ರೆಯಲ್ಲಿ ಘಟಾನುಘಟಿ ರಾಜಕಾರಣಿಗಳನ್ನು ಬೆಳೆಸಿದೆ. ಸಪ್ತರ್ಷಿಗಳು ಕೂಡ ಶಿಕ್ಷಕ ಮತಕ್ಷೇತ್ರವನ್ನು ಪ್ರತಿನಿಧಿಸಿ ಆರಿಸಿ ಬಂದಿದ್ದರು. ಇಂದು ನಮ್ಮ ಸಂಸ್ಥೆಯ ಹಳೆಯ ವಿದ್ಯಾರ್ಥಿಯಾಗಿ ರಾಜ್ಯದ ಮುಖ್ಯಮಂತ್ರಿ ಹುದ್ದೆಯನ್ನು ನಿರ್ವಹಿಸಿದ್ದ ಶೆಟ್ಟರ ಅವರು ಸಂಸ್ಥೆಗಾಗಿ ಹಾಗೂ ನಾಡಿಗೆ ಬಹುಮೌಲಿಕವಾದ ಕೊಡುಗೆಯನ್ನು ನೀಡಿದ್ದಾರೆ. ಅವರ ಅಭಿವೃದ್ಧಿ ಕೆಲಸ ಕಾರ್ಯಗಳು ಇಂದಿಗೂ ಮಹತ್ವಪೂರ್ಣವೆನಿಸಿವೆಕೊಂಡಿವೆ. ಅವರು ನಮ್ಮವರು, ಎಲ್ಲಕ್ಕೂ ಮುಖ್ಯವಾಗಿ ಬೆಳಗಾವಿಯ ಅಭಿವೃದ್ಧಿಗಾಗಿ ದಶಕಗಳಿಂದ ಕೈಜೋಡಿಸುತ್ತಾ ಬಂದಿದ್ದಾರೆ. ಮೋದಿಜೀಯವರ ಸಮರ್ಥ ನೇತೃತ್ವದಲ್ಲಿ ಜರುಗಿರುವ ಲೋಕಸಭಾ ಚುನಾವಣೆಯಲ್ಲಿ ಭಾರತೀಯ ಜನತಾ ಪಕ್ಷ ಬಹುಮತದಿಂದ ಅಧಿಕಾರದ ಚುಕ್ಕಾಣಿಯನ್ನು ಹಿಡಿದರೆ ದೇಶ ಚಿತ್ರಣ ಬದಲಾಗುವುದರಲ್ಲಿ ಸಂದೇಹವಿಲ್ಲ. ದೇಶ ಇಂದು ಜಗತ್ತಿನ ಪ್ರಬಲ ಆರ್ಥಿಕಕ್ಷೇತ್ರದಲ್ಲಿ ಗುರುತಿಸಿಕೊಂಡಿದೆ. ನಮ್ಮ ವೈರಿ ರಾಷ್ಟ್ರಗಳು ಭಾರತವನ್ನು ಕಂಡು ಹೆದುರುತ್ತಿವೆ. ಮೊದಲಿನ ಪರಿಸ್ಥಿತಿ ಇಂದಿಲ್ಲ. ಭಾರತ ತಲೆಎತ್ತಿ ನಿಂತಿದೆ. ಕಳೆದ ಒಂದು ದಶಕದಲ್ಲಿ ವಿಶ್ವದ ಪ್ರಬಲ ರಾಷ್ಟ್ರವಾಗಿ ರೂಪುಗೊಂಡಿದೆ ಇದೆಲ್ಲ ಸಾಧ್ಯವಾದದ್ದು ನರೇಂದ್ರ ಮೋದಿಜಿಯವರಿಂದ ಎಂಬುದನ್ನು ಅರಿಯಬೇಕು. ಪ್ರಜ್ಞಾವಂತರಾದ ನಾವು ಮತದಾನವನ್ನು ಮಾಡಬೇಕು. ಉತ್ತಮವಾದ ವ್ಯಕ್ತಿಯನ್ನು ಆಯ್ಕೆ ಮಾಡಬೇಕು. ನಮ್ಮ ಮತ ಮಾನ್ಯ ಜಗದೀಶ ಶೆಟ್ಟರ ಅವರಿಗೆ ಇರಲೆಂದು ಸಭಿಕರಿಗೆ ವಿನಂತಿಸಿಕೊಂಡರು.

ಇದೇ ಸಂದರ್ಭದಲ್ಲಿ ಬೆಳಗಾವಿ ಲೋಕಸಭಾ ಮತ ಕ್ಷೇತ್ರದ ಬಿಜೆಪಿ ಅಭ್ಯರ್ಥಿ, ಮಾಜಿಮುಖ್ಯಮಂತ್ರಿ ಜಗದೀಶ ಶೆಟ್ಟರ ಮಾತನಾಡಿ, ನಾನು ಕೂಡ ಕೆಎಲ್‌ಇ ವಿದ್ಯಾರ್ಥಿಯಾಗಿದ್ದು, ಬೆಳಗಾವಿಯ ಸಮಗ್ರ ಅಭಿವೃದ್ಧಿಗೆ ಶ್ರಮವಹಿಸುತ್ತೇನೆ. ಬೆಳಗಾವಿಯೂ ಕೂಡ ನನಗೆ ಅಷ್ಟೆಮುಖ್ಯ. ಇದರ ಅಭಿವೃದ್ಧಿಗೆ ಆದ್ಯತೆ ನೀಡುತ್ತೇನೆ. ದಕ್ಷಿಣ ಕರ್ನಾಟಕ ಸಾಕಷ್ಟು ಅಭಿವೃದ್ಧಿಯಾಗಿದೆ.ಅಧಿವೇಶನಕ್ಕೆ ಕೆಎಲ್‌ಇ ಕೊಡುಗೆ ಅನನ್ಯ. ಬೆಳಗಾವಿ ಅಭಿವೃದ್ಧಿ ನನ್ನ ಅಭಿಲಾಷೆ ಎಂದು ಹೇಳಿದರು.

ಸುವರ್ಣಸೌಧಕ್ಕೆ ಅನುಮತಿ ನೀಡಿ ಭೂಮಿಪೂಜೆ ಮಾಡಿದ್ದು ನಾನೆ. ಬೆಳಗಾವಿ ಜೊತೆ ನನ್ನದು ಅವಿನಾಭಾವ ಸಂಬಂಧ. ನಾನು ಹೊರಗಿನವರು ಎನ್ನಬೇಡಿ. ನನಗೂ ಅವಕಾಶ ಕೊಡಿ. ಬೆಳಗಾವಿಗೆ ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಯಾವುದೇ ಕಾರಣಕ್ಕೂ ಬೆಳಗಾವಿಯನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಬೆಳೆಸುವದು, ರೇಲ್ವೆ ಹಾಗೂ ವಿಮಾನ ನಿಲ್ದಾಣವನ್ನು ಅಂತರಾಷ್ಟ್ರೀಯ ಮಟ್ಟಕ್ಕೆ ಮೇಲ್ದರ್ಜೆಗೆ ಏರಿಸಲಾಗುವದು ಎಂದು ಹೇಳಿದರು.

ಪ್ರಧಾನ ಮೋದಿ ಅವರ ಮುಂದಾಳತ್ವದಲ್ಲಿ ಭಾರತ ವಿಶ್ವದಲ್ಲಿಯೇ ಪ್ರಮುಖ ರಾಷ್ಟ್ರವಾಗಿ ಆರ್ಥಿಕತೆಯಲ್ಲಿ ಸಬಲತೆಯನ್ನು ಹೊಂದುತ್ತಿದೆ. ಅವರ ಯೋಜನೆಗಳು ದೇಶಕ್ಕೆ ಭದ್ರವಾದ ಬುನಾದಿಯನ್ನು ಹಾಕಿವೆ. ಅವರ ಹೆಸರು ಜನಮಾಸದಲ್ಲಿ ಬೆರೆತುಹೋಗಿದೆ. ಭ್ರಷ್ಟರಹಿತವಾಗಿ ಆಡಳಿತವನ್ನು ನಡೆಸಿದ್ದಾರೆ. ಒಂದೇ ಒಂದು ಕಪ್ಪುಚುಕ್ಕೆ ಇಲ್ಲದೆ ವ್ಯಕ್ತಿತ್ವ ಅವರದು. ಅಂತಹ ನಾಯಕ ಸಾರಥ್ಯದಲ್ಲಿ ಭಾರತೀಯ ಜನತಾ ಪಕ್ಷ ಮುನ್ನಡೆಯುತ್ತಿದೆ. ನಾನೂ ಕೂಡ ಕೆಎಲ್‌ಇ ಸಂಸ್ಥೆಯ ಹಳೆಯ ವಿದ್ಯಾರ್ಥಿ, ಕೆಎಲ್‌ಇ ಸಂಸ್ಥೆಯು ಅನೇಕ ರಾಷ್ಟ್ರ ನಾಯಕರನ್ನು ಬೆಳೆಸಿದೆ. ನಮ್ಮೆಲ್ಲ ಆಶೀರ್ವಾದ ನನ್ನ ಮೇಲೆ ಇರಲೆಂದು ಹೇಳಿದರು. ಈ ಸಂದರ್ಭದಲ್ಲಿ ಕೆಎಲ್‌ಇ ನಿರ್ದೇಶಕರು, ಮಾಜಿ ವಿಧಾನ ಪರಿಷತ್ ಸದಸ್ಯರಾದ ಮಹಾಂತೇಶ ಕವಟಗಿಮಠ, ಕೆಎಲ್‌ಇ ಕಾರ್ಯದರ್ಶಿಗಳಾದ ಡಾ.ಬಿ.ಜಿ.ದೇಸಾಯಿಉಪಸ್ಥಿತರಿದ್ದರು. ಕೆಎಲ್‌ಇ ಸಿಬ್ಬಂದಿವರ್ಗದವರು ಪಾಲ್ಗೊಂಡಿದ್ದರು

# ಕೈಗಾರಿಕಾ ಪ್ರದೇಶಗಳಲ್ಲಿ ಮತದಾನ ಜಾಗೃತಿ ಜಾಥಾ




ಬಳ್ಳಾರಿ, ಏ-: ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಮತ್ತು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ಆಶ್ರಯದಲ್ಲಿ ನಡೆದ ‘ಮತದಾನ ಜಾಗೃತಿ ಜಾಥಾ’ ಇಂಡಸ್ಟ್ರಿಯಲ್ ಏರಿಯಾಗಳಲ್ಲಿ ಶುಕ್ರವಾರ ಸಂಚಾರ ಮಾಡಿ ಕೈಗಾರಿಕಾ ಘಟಕಗಳಲ್ಲಿ ಕೆಲಸ ಮಾಡುವ ಕಾರ್ಮಿಕರು ಮತ್ತು ಸಿಬ್ಬಂದಿಗೆ ಕಡ್ಡಾಯ ಮತದಾನದ ಪ್ರತಿಜ್ಞಾವಿಧಿಯನ್ನು ಬೋಧಿಸಲಾಯಿತು.

ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಬಿ. ಸೋಮಶೇಖರ್, ಕೆಐಡಿಬಿ ಅಭಿವೃದ್ಧಿ ಅಧಿಕಾರಿಗಳಾದ ಗೋವಿಂದ ನಾಯಕ್, ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಬಿ. ಮಹಾರುದ್ರಗೌಡ, ಹಿರಿಯ ಉಪಾಧ್ಯಕ್ಷರಾದ ಎನ್. ಯಶವಂತರಾಜ್ ನಾಗಿರೆಡ್ಡಿ, ಜಂಟಿ ಕಾರ್ಯದರ್ಶಿಗಳಾದ ವಿ. ರಾಮಚಂದ್ರ ಹಾಗೂ ಕೆಎಸ್‌ಎಸ್‌ಐಡಿಸಿ ನೇತೃತ್ವದಲ್ಲಿ ಪ್ರತಿಜ್ಞಾವಿಧಿಯನ್ನು ಬೋಧಿಸಿ, ಮೇ 7 ರ ಮಂಗಳವಾರ ನಡೆಯುವ ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸಲು ಕೋರಲಾಯಿತು.

ಬಳ್ಳಾರಿಯ ಇಂಡಸ್ಟ್ರಿಯಲ್ ಏರಿಯಾದ ಮೊದಲನೇ ಸ್ಟೇಜ್, ಸೀಡ್ಸ್ ಕಾರ್ಪೊರೇಷನ್‌ನಿಂದ ಶುಕ್ರವಾರ ಪ್ರಾರಂಭವಾದ ‘ಮತದಾನ ಜಾಗೃತಿ ಜಾಥಾ’ ಮೊದಲನೆಯ ಹಂತ, ಎರಡನೆಯ ಹಂತ ಮತ್ತು ಹಲಕುಂದಿ ಪ್ರದೇಶದ ಇಂಡಸ್ಟ್ರಿಯಲ್ ಏರಿಯಾದ ವಿವಿಧ ಕೈಗಾರಿಕೆಗಳಿಗೆ ಭೇಟಿ ನೀಡಿ ಎಪಿಎಂಸಿಯಲ್ಲಿ ಸಮಾರೋಪಗೊಂಡಿತು. ಈ ಜಾಥಾದಲ್ಲಿ ಸೀಡ್ಸ್ ಅಸೋಸಿಯೇಷನ್‌ನ ಬಿ.ವಿ. ಬದ್ರಿನಾಥ್, ಕಾಟನ್ ಇಂಡಸ್ಟ್ರೀಸ್‌ನ ಮುಖಂಡರಾದ ದೊಡ್ಡಬಸವನಗೌಡ, ರೈಸ್ ಮಿಲ್ ಇಂಡಸ್ಟ್ರೀಸ್‌ನ ಮುಖಂಡರಾದ ಶ್ರೀಧರ್, ಇಂಡಸ್ಟ್ರಿಯಲ್ ಏರಿಯಾ ಅಸೋಸಿಯೇಷನ್ ಮುಖಂಡರಾದ ಕೆ.ಎಂ. ಶಿವಮೂರ್ತಿ, ಕೋಲ್ಡ್ ಸ್ಟೋರೇಜ್ ಅಸೋಸಿಯೇಷನ್ ಮುಖಂಡರಾದ ಬಿ. ಸತ್ಯಬಾಬು ಮತ್ತು ಅಂಕಾರಾವ್, ಸ್ಪಾಂಜ್ ಐರನ್ ಅಸೋಸಿಯೇಷನ್‌ನ ಮುಖಂಡರು, ಚೇರ್ಮನ್, ಸಿಎಸ್‌ಆರ್ ಕಮಿಟಿ, ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಟಿ. ಶ್ರೀನಿವಾಸರಾವ್ (ವಾಸು), ಎಪಿಎಂಸಿ ದಲ್ಲಾಲಿ ವರ್ತಕರ ಸಂಘದ ಡಿ. ವೀರೇಶ್, ಚೇರ್ಮನ್, ರೈತಣ್ಣನ ಊಟ ಕಮಿಟಿಯ ಯು. ಗೋವಿಂದರೆಡ್ಡಿ, ಎಂ. ಗುರುಸ್ವಾಮಿ, ಕೆ. ನಾಗೇಶ್, ಆಸ್ಪತ್ರೆ ಕಮಿಟಿ ಚೇರ್ಮನ್ ಬಿ. ಸುರೇಂದ್ರ ಕುಮಾರ್, ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ವಿಶೇಷ ಆಹ್ವಾನಿತರಾದ ಎಂ. ಶೇಷರೆಡ್ಡಿ ಇನ್ನಿತರರು ಪಾಲ್ಗೊಂಡಿದ್ದರು.

# ಆದಿತ್ಯ ಮಡಿವಾಳ ವಿದ್ಯಾರ್ಥಿನಿಗೆ ಮಡಿವಾಳ ಸಮಾಜದಿಂದ ಸತ್ಕಾರ



ಮೂಡಲಗಿ: ಮುರಾರ್ಜಿ ದೇಸಾಯಿ ವಸತಿ ಶಾಲೆಯ 6ನೇ ತರಗತಿ ಪ್ರವೇಶ ಪರೀಕ್ಷೆಯಲ್ಲಿ ಬೆಳಗಾವಿ ಜಿಲ್ಲೆಗೆ ಏಳನೇ ಸ್ಥಾನ ಪಡೆದ ಪಟ್ಟಣದ ಆದಿತ್ಯ ಶಿವಾನಂದ ಮಡಿವಾಳ ವಿದ್ಯಾರ್ಥಿನಿಯನ್ನು ಮೂಡಲಗಿಯಲ್ಲಿ ಮಡಿವಾಳ ಸಮಾಜದಿಂದ ಸತ್ಕರಿಸಿದರು.

ಈ ಸಮಯದಲ್ಲಿ ಮಡಿವಾಳ ಸಮಾಜ ಯುವ ಮುಖಂಡ ಮುನ್ಯಾಳದ ಶಿವಾನಂದ ಮಡಿವಾಳರ ಮಾತನಾಡಿ, ಮಡಿವಾಳ ಸಮಾಜದಲ್ಲಿನ ಬಡ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಉನ್ನತ ವಿಧ್ಯಾಭ್ಯಾಸ ಹೊಂದಲು ಸಮಾಜ ಭಾಂಧವರ ಸಹಾಯ-ಸಹಕಾರ ಬಹಳ ಅವಶ್ಯವಾಗಿದೆ ಎಂದ ಅವರು ಆದಿತ್ಯ ಮಡಿವಾಳ ಮುರಾರ್ಜಿ ವಸತಿ ಶಾಲೆಯ ಪ್ರವೇಶ ಪರೀಕ್ಷೆಯಲ್ಲಿ ಜಿಲ್ಲೆಗೆ ಏಳನೇ ಸ್ಥಾನ ಪಡೆದಿರುವುದು ಹೆಮ್ಮೆಯ ವಿಷಯ ಎಂದು ಹರ್ಷ ವ್ಯಕ್ತಪಡಿಸಿದರು.

ಈ ಸತ್ಕಾರ ಸಮಾರಂಭದಲ್ಲಿ ಮೂಡಲಗಿ ಮಡಿವಾಳ ಸಮಾಜದ ಹಿರಿಯರಾದ ಬಸವರಾಜ ಮಡಿವಾಳ, ಗಿರೀಶ ಮಡಿವಾಳರ, ಶಿವಾನಂದ ಈ.ಮಡಿವಾಳರ, ಶಿವಾನಂದ ಬ.ಮಡಿವಾಳ ಮತ್ತು ಪುರಸಭೆ ಸದಸ್ಯ ಶಿವಾನಂದ ಚಂಡಕಿ ಮತ್ತಿತರರು ಇದ್ದರು.

# ಅಂಚೆ ನೌಕರರಿಂದ ಮತದಾನ ಜಾಗೃತಿಗೆ ಕಾಲ್ನಡಿಗೆ ಜಾಥಾ




ಬಳ್ಳಾರಿ,ಏ-:ನಗರದ ಅಂಚೆ ನೌಕರರಿಂದ ಮತದಾನ ಜಾಗೃತಿ ಅಭಿಯಾನ ಅಂಗವಾಗಿ ಶುಕ್ರವಾರ ಕಾಲ್ನಡಿಗೆ ಜಾಥಾ ಹಮ್ಮಿಕೊಳ್ಳಲಾಯಿತು.ಅಂಚೆ ಅಧೀಕ್ಷಕ ವಿ.ಎಲ್.ಚಿತಕೋಟೆ ಅವರು ಕಾಲ್ನಡಿಗೆ ಜಾಥಾಗೆ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಮತದಾನ ಪ್ರತಿ ಭಾರತೀಯನಿಗೆ ಸಿಕ್ಕ ಅಮೂಲ್ಯ ಹಕ್ಕು, ಪ್ರಜಾಪ್ರಭುತ್ವ ಬಲಪಡಿಸಲು ಅರ್ಹ ಅಭ್ಯರ್ಥಿಗಳಿಗೆ ನೀಡಬೇಕು ಎಂದು ಕರೆ ನೀಡಿದರು.ಪ್ರತಿಯೊಬ್ಬ ಅರ್ಹ ಮತದಾರರು ಮೇ 07 ರಂದು ಲೋಕಸಭೆ ಚುನಾವಣೆಗೆ ತಪ್ಪದೇ ಮತದಾನ ಮಾಡಬೇಕು ಎಂದರು.
ಕಾಲ್ನಡಿಗೆ ಜಾಥಾವು ನಗರದ ಕನಕ ದುರ್ಗಮ್ಮ ದೇವಸ್ಥಾನದಿಂದ ಆರಂಭವಾಗಿ ತಾಳೂರು ರಸ್ತೆ, ಕಪ್ಪಗಲ್ ರಸ್ತೆ, ಗಾಂಧಿನಗರ ಮಾರ್ಕೆಟ್, ಮೋಕಾ ರಸ್ತೆ ಮಾರ್ಗವಾಗಿ ಸಂಚರಿಸಿ ಮತದಾನ ಜಾಗೃತಿ ಮೂಡಿಸಲಾಯಿತು.ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಆಯುಕ್ತ ಜಿ.ಖಲೀಲ್ ಸಾಬ್, ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ವಾಗೀಶ್ ಶಿವಾಚಾರ್ಯ ಸೇರಿದಂತೆ ಅಂಚೆ ಇಲಾಖೆಯ ವಿವಿಧ ವಲಯಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಭಾಗವಹಿಸಿದ್ದರು.

# ಬಿಜೆಪಿ ಪಕ್ಷದ ಅಭ್ಯರ್ಥಿ ಶ್ರೀರಾಮುಲು ಅವರನ್ನು ಬಹುದೊಡ್ಡ ಮತಗಳ ಅಂತರದಿಂದ ಗೆಲ್ಲಿಸಬೇಕು-ಗಾಲಿ ಲಕ್ಷ್ಮಿಅರುಣ



ಬಳ್ಳಾರಿ ನಗರದ 19 ನೇ ವಾರ್ಡಿನ ಪಟೇಲ್ ನಗರ, ರಾಮಯ್ಯ ಕಾಲೋನಿಥಿ ಮಸೀದಿಯ ಬಳಿ ಲೋಕಸಭಾ ಚುನಾವಣಾ ಪ್ರಚಾರದಲ್ಲಿ ಶ್ರೀಮತಿ ಗಾಲಿ ಲಕ್ಷ್ಮಿಅರುಣ ಅವರು ಕೈಗೊಂಡರು. ನಂತರ ವಾರ್ಡಿನ ಪ್ರಮುಖ ಕಾರ್ಯಕರ್ತರ ಮನೆಗೆ ಶ್ರೀಮತಿ ಗಾಲಿ ಲಕ್ಷ್ಮಿಅರುಣ ಅವರು ಭೇಟಿ ನೀಡಿ ಕುಶಲೋಪರಿ ವಿಚಾರಿಸಿದರು.

ಲೋಕಸಭಾ ಚುನಾವಣ ‘ಯಲ್ಲಿ ಕೈಗೊಳ್ಳ ಬೇಕಾದ ಕಾರ್ಯತಂತ್ರಗಳು, ಪ್ರಚಾರದ ರೀತಿ, ಮೋದಿಜೀಯವರ 10 ವರ್ಷಗಳ ಆಡಳಿತದಲ್ಲಿ ಕೈಗೊಂಡ ಅಭಿವೃದ್ದಿ ಕಾರ್ಯಗಳು, ಬಿ.ಎಸ್.ಯಡಿಯೂರಪ್ಪ ಅವರು, ಶ್ರೀಮತಿ ಗಾಲಿ ಲಕ್ಷ್ಮಿಅರುಣ, ಗಾಲಿ ಜನಾರ್ಧನರೆಡ್ಡಿಯವರು ಬಳ್ಳಾರಿಗೆ ನೀಡಿದ ಶಾಶ್ವತ ಯೋಜನೆಗಳು ಹಾಗೂ ಅಭಿವೃದ್ಧಿಗಳ ಕುರಿತು ತಿಳಿಸಲಾಯಿತು.

ವಿಕಸಿತ ಹಾಗೂ ಸದೃಢ ಭಾರತಕ್ಕಾಗಿ ಮತ್ತೊಮ್ಮೆ ಸನ್ಮಾನ್ಯ ನರೇಂದ್ರ ಮೋದಿಜಿ ಅವರು ದೇಶದ ಪ್ರಧಾನ ಮಂತ್ರಿಯಾಗಲು ದೇಶದ ಜನತೆ ಈಗಾಗಲೇ ನಿರ್ಧರಿಸಿದ್ದು, ಬಳ್ಳಾರಿಯ ಸಮಸ್ತ ಜನತೆ ಬಿಜೆಪಿ ಪಕ್ಷದ ಅಭ್ಯರ್ಥಿಯಾದ ಶ್ರೀರಾಮುಲು ಅವರನ್ನು ಬಹುದೊಡ್ಡ ಮತಗಳ ಅಂತರದಿಂದ ಗೆಲ್ಲಿಸಬೇಕೆಂದು ಶ್ರೀಮತಿ ಗಾಲಿ ಲಕ್ಷ್ಮಿಅರುಣ ಅವರು ಮತಯಾಚಿಸಿದರು.ಕಾರ್ಯಕ್ರಮದಲ್ಲಿ ಕಿಟ್ಟು, ದಮ್ಮೂರು ಶೇಖರ್, ಬಿಕೆ ರಾಜು, ಮೆಹಪೂಜ್ ಆಲಿಖಾನ್,ನಗರ ಪ್ರಧಾನ ಕಾರ್ಯದರ್ಶಿ ರಾಮಾಂಜಿನ, ಮಲ್ಲಿಕಾರ್ಜುನ ಆಚಾರ್,ರೋಸಿರೆಡ್ಡಿ, ಹಂಪಿ ರಮಣ, ಮುನೀರ್ , ಶೇಕ್ಷಾವಲಿ, ಶೇಖಮ್ಮ, ಮಹಿಳಾ ಮೋರ್ಚಾ ಪ್ರಧಾನ ಕಾರ್ಯದರ್ಶಿ ಪುಷ್ಪಾ ಹಾಗೂ ವಾರ್ಡಿನ ಪ್ರಮುಖರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

# ವಿದ್ಯಾರ್ಥಿನಿಯನ್ನು ಕೊಲೆಗೈದ ಆರೋಪಿಗೆ ಗಲ್ಲು ಶಿಕ್ಷೆ ಆಗಬೇಕು



ಬಳ್ಳಾರಿ ಏ-: ಹುಬ್ಬಳ್ಳಿ ನಗರದಲ್ಲಿ ಗುರುವಾರ ನಡೆದ ವಿದ್ಯಾರ್ಥಿನಿ ಕೊಲೆಯಿಂದ ನಗರ ಬೆಚ್ಚಿಬಿದ್ದಿದೆ. ಹಾಡುಹಗಲೇ ಯುವತಿಯನ್ನು ಹತ್ಯಗೈದಿರುವುದು ಹೀನಾಯ ಕೃತ್ಯವಾಗಿದೆ. ಕೂಡಲೇ ಹತ್ಯಗೈದ ಆರೋಪಿ ಫಯಾಜ್ ನ್ನು ಬಂಧಿಸಿ, ಗಲ್ಲುಶಿಕ್ಷೆ ನೀಡಬೇಕು ಎಂದು ವೀರಶೈವ ಲಿಂಗಾಯಿತ ಕ್ರಿಯಾ ಸಮಿತಿ ಹೋರಾಟಗಾರರು ಮತ್ತು ವಿವಿಧ ಸಂಘಟನೆಗಳು ಶುಕ್ರವಾರ ನಗರದ ಜಿಲ್ಲಾಧಿಕಾರಿ ಕಚೇರಿಯ ಎದುರುಗಡೆ ಇರುವ ಗಾಂಧಿ ಪುತ್ಥಳಿ ಹತ್ತಿರ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಕುರಟ್ಟಿ ರಾಜಣ್ಣ ಅವರು, ಹುಬ್ಬಳ್ಳಿಯ ಬಿವಿಬಿ ಕಾಲೇಜ್ ಆವರಣದಲ್ಲಿ ವಿದ್ಯಾರ್ಥಿನಿ ನೇಹ ಹೀರೆಮಠ್ ಅವರ ಈ ಕೊಲೆಯಿಂದ ಸಾರ್ವಜನಿಕರಿಗೆ ರಕ್ಷಣೆ ಇಲ್ಲದಂತೆ ಆಗಿದೆ. ಇಂತಹ ಕೊಲೆಗಡುಕರಿಗೆ ಸರ್ಕಾರ ರಕ್ಷಣೆ ನೀಡುವುದು ಅತ್ಯಂತ ಹೀನಾಯ ಸಂಗತಿಯಾಗಿದೆ. ಕೂಡಲೇ ಸರ್ಕಾರ ಎಚ್ಚೆತ್ತು ಆರೋಪಿಯನ್ನು ಬಂಧಿಸಿ ನೇಹ ಹೀರೆಮಠ್ ಅವರ ಕುಟುಂಕ್ಕೆ ರಕ್ಷಣೆ ನೀಡಬೇಕು ಎಂದು ಆಗ್ರಹಿಸಿದರು. ಅಮಾಯಕ ಹೆಣ್ಣು ಮಕ್ಕಳಿಗೆ ಸರ್ಕಾರ ರಕ್ಷಣೆ ನೀಡುತ್ತಿಲ್ಲ. ಸರಕಾರ ಕೇವಲ ಆರೋಪಿಯನ್ನು ಬಂಧಿಸಿದರೆ ಸಾಲದು ಅವರಿಗೆ ಗಲ್ಲುಶಿಕ್ಷೆ ನೀಡಬೇಕು ಇಲ್ಲವಾದರೆ ಅವನನ್ನು ನಡು ರಸ್ತೆಯಲ್ಲಿ ಎನ್ಕೌಂಟರ್ ಮಾಡಬೇಕೆಂದು ಎಂದು ಆಗ್ರಹಿಸಿದರು. ಈ ಇಲ್ಲದಂತೆ ಆಗಿದೆ. ಇಂತಹ ಕೋಲೆಗಡುಕರಿಗೆ ಸರ್ಕಾರ ರಕ್ಷಣೆ ನೀಡುವುದು ಅತ್ಯಂತ ಹೀನಾಯ ಸಂಗತಿಯಾಗಿದೆ. ಕೂಡಲೇ ಸರ್ಕಾರ ಎಚ್ಚೆತ್ತು ಆರೋಪಿಯನ್ನು ಬಂಧಿಸಿ ನೇಹ ಹೀರೆಮಠ್ ಅವರ ಕುಟುಂಕ್ಕೆ ರಕ್ಷಣೆ ನೀಡಬೇಕು ಎಂದು ಆಗ್ರಹಿಸಿದರು. ಅಮಾಯಕ ಹೆಣ್ಣು ಮಕ್ಕಳಿಗೆ ಸರ್ಕಾರ ರಕ್ಷಣೆ ನೀಡುತ್ತಿಲ್ಲ. ಸರಕಾರ ಕೇವಲ ಆರೋಪಿಯನ್ನು ಬಂಧಿಸಿದರೆ ಸಾಲದು ಅವರಿಗೆ ಗಲ್ಲುಶಿಕ್ಷೆ ನೀಡಬೇಕು ಇಲ್ಲವಾದರೆ ಅವನನ್ನು ನಡು ರಸ್ತೆಯಲ್ಲಿ ಎನ್ಕೌಂಟರ್ ಮಾಡಬೇಕೆಂದು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ವೀರಶೈವ ವಿದ್ಯಾವರ್ಧಕ ಸಂಘದ ಮಾಜಿ ಅಧ್ಯಕ್ಷ ಗುರುಸಿದ್ದ ಸ್ವಾಮಿ ಮೈಸೂರಸ್ವಾಮಿ ಪಂಚಾಕ್ಷರಿ ಪುರುಷೋತ್ತಮ್ ಗೌಡ ಮಹೇಂದ್ರ ಕುಮಾರ್ ಕೋರಿ ವಿರೂಪಾಕ್ಷಣ್ಣ ಇನ್ನು ಮುಂತಾದ ಸಮಾಜ ಮುಖಂಡರು ಸೇರಿದಂತೆ ವಿವಿಧ ಸಂಘಟನೆಯ ಮುಖಂಡರು ಹಾಜರಿದ್ದರು.